## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** 2022-23ನೇ ಸಾಲಿನ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ವಿವಿಧ ಸಮುದಾಯಗಳ ಅಭಿವೃದ್ಧಿ ಕಾರ್ಯಕ್ರಮಕ್ಕೆ ಒದಗಿಸಿರುವ ಅನುದಾನದಲ್ಲಿ ಮೊದಲನೇ ಕಂತಿನ ಅನುದಾನವನ್ನು ಬಿಡುಗಡೆಗೊಳಿಸುವ ಕುರಿತು.

**ಓದಲಾಗಿದೆ:-**
1. 2021-22 ಸಾಲಿನ ಆಯವ್ಯಯ ಸವಿವರ ವೆಚ್ಚದ ಅಂದಾಜುಗಳ ಸಂಪುಟ-5.
2. ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ:ಎಫ್‌ಡಿ 01 ಟಿಎಫ್‌ಪಿ 2022, ದಿನಾಂಕ: 04.04.2022.
3. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಏಕ ಕಡತ ಸಂಖ್ಯೆ BCWD-18022/7/2022-BCWD-ACCT-BCWD
4. ಆರ್ಥಿಕ ಇಲಾಖೆಯ ಸಲಹಾ ಟಿಪ್ಪಣಿ ಸಂಖ್ಯೆ: ಆಇ 01 ವೆಚ್ಚ-3/2022, ದಿನಾಂಕ:05.04.2022.

******

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿ 2022-23ನೇ ಸಾಲಿನ ಆಯವ್ಯಯದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಅನುದಾನವನ್ನು ಹಂಚಿಕೆ ಮಾಡಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಆರ್ಥಿಕ ಇಲಾಖೆಯ ಆದೇಶದಲ್ಲಿ 2022-23ನೇ ಸಾಲಿನಲ್ಲಿ ಮೊದಲನೇ ಮತ್ತು ಎರಡನೇ ತ್ರೈಮಾಸಿಕ ಕಂತಿನ ಅನುದಾನವನ್ನು ಬಿಡುಗಡೆ ಮಾಡಲು ಸರ್ಕಾರದ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿಯವರಿಗೆ ಅಧಿಕಾರ ಪ್ರತ್ಯಾಯೋಜಿಸಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಏಕ ಕಡತದಲ್ಲಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು 2022-23ನೇ ಸಾಲಿನ ಅಯವ್ಯಯದಲ್ಲಿ ವಿವಿಧ ಸಮುದಾಯಗಳ ಅಭಿವೃದ್ಧಿ ಕಾರ್ಯಕ್ರಮದಡಿ ಒದಗಿಸಿರುವ ಅನುದಾನದಲ್ಲಿ ಮೊದಲನೇ ಮತ್ತು ಎರಡನೇ ತ್ರೈಮಾಸಿಕ ಕಂತಿನ ಅನುದಾನವನ್ನು ಬಿಡುಗಡೆ ಮಾಡುವಂತೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4)ರ ಆರ್ಥಿಕ ಇಲಾಖೆಯ ಸಲಹಾ ಟಿಪ್ಪಣಿಯಲ್ಲಿ ವಿವಿಧ ಸಮುದಾಯಗಳ ಅಭಿವೃದ್ಧಿ ಕಾರ್ಯಕ್ರಮದಡಿ ಒದಗಿಸಿರುವ ಅನುದಾನದಲ್ಲಿ ರೂ.100.00ಕೋಟಿ ಮೊತ್ತವನ್ನು ಮಾನ್ಯ ಮುಖ್ಯಮಂತ್ರಿಯವರ ವಿಶೇಷ ವಿವೇಚನೆಗೆ ಒಳಪಡಿಸಿದ್ದು, ಈ ಅನುದಾನವನ್ನು ಮಾನ್ಯ ಮುಖ್ಯ ಮಂತ್ರಿಯವರ ಅನುಮೋದನೆ ಪಡೆದೇ ಅನುದಾನ ಬಿಡುಗಡೆ ಮಾಡತಕ್ಕದ್ದು. ಮುಂದುವರೆದು, ಇದೇ ಲೆಕ್ಕಶೀರ್ಷಿಕೆಯಡಿ ಮಡಿವಾಳ ಮಾಚಿದೇವ ಅಭಿವೃದ್ಧಿ ನಿಗಮಕ್ಕೆ ರೂ.6.00ಕೋಟಿ, ಕಾಡುಗೊಲ್ಲ ಅಭಿವೃದ್ಧಿ ನಿಗಮ ನಿಯಮಿತ ರೂ.3.00ಕೋಟಿ, ಸವಿತಾ ಸಮಾಜ ಅಭಿವೃದ್ಧಿ ನಿಗಮಕ್ಕೆ ರೂ.5.00ಕೋಟಿ, ಅಲೆಮಾರಿ/ಅರೆ ಅಲೆಮಾರಿ ಅಭಿವೃದ್ಧಿ ನಿಗಮಕ್ಕೆ ರೂ.6.00ಕೋಟಿ ಹಾಗೂ ಮರಾಠಾ ಅಭಿವೃದ್ಧಿ ನಿಗಮಕ್ಕೆ ರೂ.10.00ಕೋಟಿ ಒಟ್ಟಾರೆ ರೂ.30.00ಕೋಟಿ ಅನುದಾನವನ್ನು ಹಂಚಿಕೆ ಮಾಡಿ ಬಿಡುಗಡೆ ಮಾಡುವಂತೆ ಹಾಗೂ ಉಳಿದ ರೂ.20.00ಕೋಟಿಗಳನ್ನು ಮುಂದುವರೆದ ಯೋಜನೆಗೆ ಬಳಸಿಕೊಳ್ಳುವಂತೆ ಸೂಚಿಸಿರುತ್ತಾರೆ.

08/08/2022

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 329 ಬಿಎಂಎಸ್ 2022**
**ಬೆಂಗಳೂರು, ದಿನಾಂಕ: 08.08.2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2022-23ನೇ ಸಾಲಿನ ಅಯವ್ಯಯದಲ್ಲಿ ವಿವಿಧ ಸಮುದಾಯಗಳ ಅಭಿವೃದ್ಧಿ ಕಾರ್ಯಕ್ರಮ ಲೆಕ್ಕಶೀರ್ಷಿಕೆ:2225-03-001-0-05(103) ರಡಿ ಒದಗಿಸಿರುವ ಅನುದಾನದಲ್ಲಿ ರೂ.35.00ಕೋಟಿಗಳನ್ನು (ಮೂವತ್ತೈದು ಕೋಟಿಗಳು ಮಾತ್ರ) ಮೊದಲನೇ ತ್ರೈಮಾಸಿಕ ಕಂತಿನ ಅನುದಾನವಾಗಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರಿಗೆ ಬಿಡುಗಡೆ ಮಾಡಿ ಆದೇಶಿಸಿದೆ.

**ಷರತ್ತುಗಳು:**

1. ಬಿಡುಗಡೆ ಮಾಡಲಾಗಿರುವ ಅನುದಾನವನ್ನು ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆರವರು ಯೋಜನೆಯ ಮಾರ್ಗಸೂಚಿಗಳಂತೆ 2022-23ನೇ ಸಾಲಿನ ಆರ್ಥಿಕ ವರ್ಷದಲ್ಲಿ ಮಂಜೂರಾದ ಹೊಸ ಸಂಘ-ಸಂಸ್ಥೆಗಳಿಗೆ ಮೊದಲನೇ ಕಂತಿನ(ಶೇ.25%) ಅನುದಾನಕ್ಕೆ ನಿಯಮಾನುಸಾರ ಬೇಡಿಕೆ ಬಂದಿರುವ ಪ್ರಸ್ತಾವನೆಗಳಿಗೆ ಜೇಷ್ಠತೆ ಹಾಗೂ ಅರ್ಹತೆಯನುಸಾರ ಸರ್ಕಾರದ ಆದೇಶ ಸಂಖ್ಯೆ:ಹಿಂವಕ 695 ಬಿಎಂಎಸ್ 2014(ಭಾ-2), ದಿನಾಂಕ:05.11.2014 ಮತ್ತು ಹಿಂವಕ 1133 ಬಿಎಂಎಸ್ 2017, ದಿನಾಂಕ:29.11.2017 ರನ್ವಯ ಅನುದಾನ ಬಿಡುಗಡೆ ಮಾಡತಕ್ಕದ್ದು. ಒಂದು ವೇಳೆ ಜೇಷ್ಠತೆಯನ್ನು ಹೊರತುಪಡಿಸಿ ಅನುದಾನ ಬಿಡುಗಡೆ ಮಾಡಿದ ಪಕ್ಷದಲ್ಲಿ ಹಾಗೂ ಸಂಘ/ಸಂಸ್ಥೆಗಳಿಂದ ದೂರುಗಳು ಸರ್ಕಾರದಲ್ಲಿ ಸ್ವೀಕೃತಗೊಂಡಲ್ಲಿ ಸಂಬಂಧಪಟ್ಟ ಪ್ರಾಧಿಕಾರ/ಅಧಿಕಾರಿಗಳನ್ನು ನೇರ ಹೊಣೆಗಾರರನ್ನಾಗಿಸಲಾಗುವುದು.

2. 2022-23ನೇ ಸಾಲಿನಲ್ಲಿ ಬಿಡುಗಡೆ ಮಾಡಿದ ಅನುದಾನದ ಹಣ ಬಳಕೆ ಪ್ರಮಾಣ ಪತ್ರವನ್ನು ಮುಂದಿನ ಅನುದಾನದ ಕೋರಿಕೆ ಪ್ರಸ್ತಾವನೆಯೊಂದಿಗೆ ಕಡ್ಡಾಯವಾಗಿ ಸಲ್ಲಿಸತಕ್ಕದ್ದು

3. ಮಂಜೂರು ಮಾಡಲಾದ ಅನುದಾನವನ್ನು ಯಾವ ಉದ್ದೇಶಕ್ಕಾಗಿ ನೀಡಲಾಗಿದೆಯೋ, ಅದೇ ಉದ್ದೇಶಕ್ಕೆ ಬಳಸಿಕೊಳ್ಳತಕ್ಕದ್ದು. ಯಾವುದೇ ಕಾರಣಕ್ಕೂ ಬೇರೆ ಉದ್ದೇಶಕ್ಕೆ ಬಳಸಿಕೊಳ್ಳತಕ್ಕದ್ದಲ್ಲ.

4. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು ಇವರು ಸರ್ಕಾರದಿಂದ ನೀಡಲಾಗುತ್ತಿರುವ ಅನುದಾನವನ್ನು ನಿಯಮಾನುಸಾರ ಸದ್ಬಳಕೆ ಮಾಡಿರುವ ಬಗ್ಗೆ ಎಲ್ಲಾ ರೀತಿಯ ಅವಶ್ಯಕ ಕ್ರಮ ತೆಗೆದುಕೊಳ್ಳುವುದು.

5. ಅನುದಾನ ಬಿಡುಗಡೆ ಮತ್ತು ಬಳಕೆಗೆ ಸಂಬಂಧಿಸಿದಂತೆ ಕಾಮಗಾರಿವಾರು/ ತಾಲ್ಲೂಕುವಾರು /ಜಿಲ್ಲಾವಾರು ವಿವರಗಳನ್ನು ಆಯುಕ್ತಾಲಯದ ಜಾಲತಾಣದಲ್ಲಿ ಕಡ್ಡಾಯವಾಗಿ ಅಪ್‌ಲೋಡ್ ಮಾಡತಕ್ಕದ್ದು.

08/08/22

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 432 ವೆಚ್ಚ-3/2021, ದಿನಾಂಕ:16.07.2022ರ ಸಹಮತಿಯನ್ವಯ ಹಾಗೂ ಸರ್ಕಾರದ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ ಇವರಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ

Shaheen parveen 08/08/2022

**(ಷಾಹೀನ್ ಪರ್ವೀನ್ .ಕೆ)**
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

ಇವರಿಗೆ:-

1. ಪ್ರಧಾನ ಮಹಾಲೇಖಪಾಲರು, (ಎ ಮತ್ತು ಇ), ಬೆಂಗಳೂರು.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ(ವೆಚ್ಚ), ವಿಧಾನಸೌಧ, ಬೆಂಗಳೂರು.
4. ಖಜನಾಧಿಕಾರಿಗಳು, ರಾಜ್ಯ ಹುಜೂರು ಖಜಾನೆ ಇಲಾಖೆ, ಬೆಂಗಳೂರು.

**ಪ್ರತಿ ಮಾಹಿತಿಗಾಗಿ:-**

1. ಸರ್ಕಾರದ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಕಾರ್ಯದರ್ಶಿಗಳು,ವಿಕಾಸಸೌಧ, ಬೆಂಗಳೂರು.
2. ಸರ್ಕಾರದ ಉಪ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಸಹಾಯಕರು,ವಿಕಾಸಸೌಧ, ಬೆಂಗಳೂರು.
3. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

***********